**ಕರ್ನಾಟಕ ವಿಧಾನ ಪರಿಷತ್**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 757 (830) |
| ಸದಸ್ಯರ ಹೆಸರು : | ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 24.08.2026 |
| ಉತ್ತರಿಸುವ ಸಚಿವರು : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಾಳಗಿ ತಾಲ್ಲೂಕಿಗೆ ಮೆಟ್ರಿಕ್ ಮತ್ತು ಮೆಟ್ರಿಕ್ ಪೂರ್ವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಕಲಬುರ್ಗಿ ಜಿಲ್ಲೆಯ ಕಾಳಗಿ ತಾಲ್ಲೂಕಿನಲ್ಲಿ 02 ಹೋಬಳಿಗಳಿದ್ದು, ಕಸಬಾ ಹೋಬಳಿಯಲ್ಲಿ 02 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ ಕೋಡ್ಲಿ ಹೋಬಳಿಯಲ್ಲಿ 01 ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಸೇರಿ ಒಟ್ಟು 03 ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿರುತ್ತವೆ.<br><br>ಹೋಬಳಿಗೊಂದು ವಸತಿ ಶಾಲೆಯನ್ನು ಮಂಜೂರು ಮಾಡಲು ಸರ್ಕಾರವು ಉದ್ದೇಶಿಸಿದ್ದು, ಕಾಳಗಿ ತಾಲ್ಲೂಕಿನ ವ್ಯಾಪ್ತಿಯ 02 ಹೋಬಳಿಗಳಲ್ಲಿ 03 ವಸತಿ ಶಾಲೆಗಳು ಈಗಾಗಲೇ ಕಾರ್ಯನಿರ್ವಹಿಸುತ್ತಿವೆ. ಹಾಗಾಗಿ, ಹೊಸದಾಗಿ ವಸತಿ ಶಾಲೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಆ) | ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಮಂಜೂರು ಮಾಡಿ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; | ಉದ್ಭವಿಸುವುದಿಲ್ಲ. |
| ಇ) | ಹಾಗಿದ್ದಲ್ಲಿ, ಈ ವಸತಿ ಶಾಲೆಗಳ ನಿರ್ಮಾಣಕ್ಕೆ ಸರ್ಕಾರ ಅನುದಾನವನ್ನೇನಾದರೂ ನಿಗದಿಪಡಿಸಿದೆಯೇ; ಹಾಗಿದ್ದಲ್ಲಿ ಪ್ರಸಕ್ತ ಸಾಲಿನಲ್ಲಿ ವಸತಿ ಶಾಲೆಗಳ ಕಟ್ಟಡದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದೇ; | |
| ಈ) | ಇಲ್ಲದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರಗಳನ್ನು ನೀಡುವುದು) | |

**ಸಂಖ್ಯೆ: ಹಿಂವಕ 654 ಬಿಂಎಂಎಸ್ 2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು
ಸಂಸ್ಕೃತಿ ಇಲಾಖೆ ಸಚಿವರು.